ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೧೧**

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತನೆಯ ಅಧಿವೇಶನ

## (ಮುಂದುವರೆದ ಉಪವೇಶನ)

**ಬುಧವಾರ, ದಿನಾಂಕ ೩೦ನೇ ಮಾರ್ಚ್, ೨೦೧೬**

---

**ಸಮೂಹ – III**

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೫. ಸಣ್ಣ ನೀರಾವರಿ ಸಚಿವರು

೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

೭. ಕಾರ್ಮಿಕ ರಾಜ್ಯ ಸಚಿವರು

---

## ಮತ್ಸ್ಯಾಶ್ರಯ ಫಲಾನುಭವಿಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೧ (೧೩೪೬) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮತ್ಸ್ಯಾಶ್ರಯ ಯೋಜನೆಯಡಿ ಮೀನುಗಾರಿಕೆ ಇಲಾಖೆಯಲ್ಲಿ ಮೀನುಗಾರರ ಫಲಾನುಭವಿಗಳಿಗೆ ೨೦೧೨–೧೩/೨೦೧೩–೧೪/೨೦೧೪–೧೫/೨೦೧೫–೧೬ರಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು; (ಫಲಾನುಭವಿಗಳ ವಿವರ ಹೆಸರುಗಳನ್ನು ಒದಗಿಸುವುದು)

(ಆ) ರಾಜ್ಯದ ನದಿ ಮತ್ತು ಜಲಾಶಯಗಳಲ್ಲಿ ಮೀನುಗಾರರಿಗೆ ಮೀನು ಶಿಕಾರಿ ಮಾಡಲು ನೀಡಿರುವ ಲೈಸೆನ್ಸ್‌ಗಳೆಷ್ಟು; (೨೦೧೨–೧೩, ೨೦೧೩–೧೪, ೨೦೧೪–೧೫, ೨೦೧೫–೧೬ರ ವಿವರ ಒದಗಿಸುವುದು)

(ಇ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಇರುವ ಮೀನುಮರಿ ಉತ್ಪಾದನಾ ಕೇಂದ್ರಗಳು ಎಷ್ಟು ಹಾಗೂ ಸದರಿ ಮೀನುಮರಿ ಉತ್ಪಾದನಾ ಕೇಂದ್ರಗಳಲ್ಲಿ ಉತ್ಪಾದಿಸಲಾಗಿರುವ ಮೀನು ಮರಿಗಳ ವಿವರ ಒದಗಿಸುವುದು; (೨೦೧೨–೧೩/೨೦೧೩–೧೪/೨೦೧೪–೧೫/೨೦೧೫–೧೬)

(ಈ) ರಾಜ್ಯದ ನದಿ ಮತ್ತು ಜಲಾಶಯಗಳಲ್ಲಿ ೨೦೧೨–೧೩, ೨೦೧೩–೧೪, ೨೦೧೪–೧೫, ೨೦೧೫–೧೬ನೇ ಸಾಲಿನಲ್ಲಿ ಬಿತ್ತನೆ ಮಾಡಿರುವ ಮೀನು ಮರಿಗಳ ಸಂಖ್ಯೆ ಎಷ್ಟು? (ವಿವರ ಒದಗಿಸುವುದು)

## ಗಿರಿಜನರಿಗೆ ಕಲ್ಪಿಸಿರುವ ಪುನರ್ವಸತಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೨ (೧೩೭೫) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಕಾಡಿನಿಂದ ನಾಡಿಗೆ ಬಂದು ಜೀವನ ಸಾಗಿಸುತ್ತಿರುವ ಗಿರಿಜನ ಕುಟುಂಬಗಳ ಸಂಖ್ಯೆ ಎಷ್ಟು; ಸದರಿ ಕುಟುಂಬಗಳಿಗೆ ಪುನರ್ವಸತಿ ಕಲ್ಪಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರ ಪ್ರತಿ ಕುಟುಂಬಕ್ಕೆ ನೀಡಿರುವ ಪರಿಹಾರವೇನು;

(ಆ) ಗಿರಿಜನರ ಪುನರ್ವಸತಿ ಯೋಜನೆಯಡಿ ಪ್ರತಿ ಕುಟುಂಬಕ್ಕೆ ನೀಡಿರುವ ಕೃಷಿ ಸಂಬಂಧಿತ ಭೂಮಿ ಎಷ್ಟು; ಕಳೆದ ೫ ವರ್ಷಗಳಿಂದ ಎಷ್ಟು ಎಕರೆ ಅರಣ್ಯ ಭೂಮಿಯನ್ನು ಗಿರಿಜನರಿಗೆ ಹಂಚಿಕೆ ಮಾಡಲಾಗಿದೆ; ಮತ್ತು ಪ್ರತಿ ಕುಟುಂಬಕ್ಕೆ ವಸತಿ (ಮನೆ ನಿರ್ಮಾಣಕ್ಕೆ) ಯನ್ನು ಕಲ್ಪಿಸಲು ನೀಡಿರುವ ಪರಿಹಾರವೆಷ್ಟು; ಈ ಪರಿಹಾರ ವಿತರಣೆ ಸಮಯದಲ್ಲಿ ಮಧ್ಯವರ್ತಿಗಳೊಂದಿಗೆ ಕೆಲ ಅಧಿಕಾರಿಗಳು ಶಾಮೀಲಾಗಿ ಅಧಿಕ ಪ್ರಮಾಣದಲ್ಲಿ ಭ್ರಷ್ಟಾಚಾರವೆಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಗಿರಿಜನ ಕುಟುಂಬಗಳಿಗೆ ಕೃಷಿ ಭೂಮಿಯನ್ನು ಮಂಜೂರು ಮಾಡುವ ಸಮಯದಲ್ಲಿ ಅನುಸರಿಸುವ ಮಾನದಂಡಗಳೇನು;

(ಈ) ಸದರಿ ಕುಟುಂಬಗಳಿಗೆ ನೀಡಿರುವ ಭೂಮಿಯಲ್ಲಿ ಹೊರ ರಾಜ್ಯಗಳ ಕೆಲವರು ಗಿರಿಜನರ ಸಹಿಯನ್ನು ಫೋರ್ಜರಿ ಮಾಡಿ, ಅವರ ಭೂಮಿಯಲ್ಲಿ ಶುಂಠಿ ಬೆಳೆಯನ್ನು ಬೆಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಅಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಹನಿ ನೀರಾವರಿ ಪದ್ಧತಿ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೩ (೧೨೯೪) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೋಲಾರ ಜಿಲ್ಲೆಗೆ ಕಳೆದ ಮೂರು ವರ್ಷಗಳಿಂದ ಹನಿ ನೀರಾವರಿ ಪದ್ಧತಿ ಅಳವಡಿಸಲು ಬಿಡುಗಡೆಯಾದ ಅನುದಾನವೆಷ್ಟು (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಈ ಹನಿ ನೀರಾವರಿ ಪದ್ಧತಿಯಿಂದ ಯಾವ ಯಾವ ಬೆಳೆಗಳಿಗೆ ಹನಿ ನೀರಾವರಿ ಪದ್ಧತಿ ಅಳವಡಿಸಲು ಸರ್ಕಾರದಿಂದ ಪ್ರೋತ್ಸಾಹ ಧನ ನೀಡಲಾಗಿದೆ? (ಬೆಳೆಗಳವಾರು ಮಾಹಿತಿ ನೀಡುವುದು)

## ಅನುದಾನ ರಹಿತ ಐ.ಟಿ.ಐ. ಕಾಲೇಜುಗಳ ಸಿಬ್ಬಂದಿಗಳ ಸೇವಾ ಭದ್ರತೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೫೪ (೧೩೨೮) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನ ರಹಿತ ಐ.ಟಿ.ಐ. ಕಾಲೇಜುಗಳ ಸಿಬ್ಬಂದಿಗಳ ವೇತನ ಹಾಗೂ ಸೇವಾ ಭದ್ರತೆ ಕುರಿತು ಇರುವ ನಿಯಮಾವಳಿಗಳು ಏನು; ಇವರ ಕನಿಷ್ಠ ವೇತನ ಪಾವತಿ ಆಗುತ್ತಿರುವ ಕುರಿತು ದೃಢಪಡಿಸಿಕೊಳ್ಳಲು ಹಾಗೂ ಇವರಿಗೆ ಸೇವಾ ಸವಲತ್ತುಗಳನ್ನು ಹಾಗೂ ಕಾನೂನುಗಳನ್ನು ಪಾಲಿಸುತ್ತಿರುವ ಕುರಿತು ಇಲಾಖೆ ಏನು ಕ್ರಮ ಕೈಗೊಂಡಿದೆ;

(ಆ) ಈ ಶಿಕ್ಷಕರಿಗೆ ನಿಗದಿಪಡಿಸಿದ ವಿದ್ಯಾರ್ಹತೆ, ಬೋಧನಾ ಗುಣಮಟ್ಟ ಇತ್ಯಾದಿಗಳನ್ನು ಯಾವ ಹಂತದ ಅಧಿಕಾರಿಗಳು ನೋಡಿಕೊಳ್ಳುತ್ತಿದ್ದಾರೆ;

(ಇ) ರಾಜ್ಯದಲ್ಲಿ ಇರುವ ಒಟ್ಟು ಸರ್ಕಾರಿ ಅನುದಾನಿತ, ಅನುದಾನ ರಹಿತ ಐ.ಟಿ.ಐ. ಕಾಲೇಜುಗಳ ಸಂಖ್ಯೆ ಎಷ್ಟು; ಇವುಗಳನ್ನು ನಿರ್ವಹಿಸಲು ಇರುವ ಇಲಾಖಾ ಸಂರಚನೆಯ ಚಿತ್ರಣ ನೀಡುವುದು?

## ಮಂಗಳೂರಿನಲ್ಲಿ ಫುಟ್‌ಬಾಲ್ ಮೈದಾನ ರಚನೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

*೧೫೫* (೧೩೧೩) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರಿನಲ್ಲಿ ಫುಟ್‌ಬಾಲ್ ಮೈದಾನ ರಚನೆಯ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಇದ್ದರೆ, ಯಾವ ಪ್ರದೇಶದಲ್ಲಿ ಯಾವ ಸ್ಥಳವನ್ನು ಗುರುತಿಸಲಾಗಿದೆ; ಇದಕ್ಕೆ ತಗಲುವ ವೆಚ್ಚ ಎಷ್ಟು; ಯಾವಾಗ ಪೂರ್ಣಗೊಳ್ಳುವುದು; (ಸಂಪೂರ್ಣ ವಿವರ ನೀಡುವುದು)

(ಆ) ಮಂಗಳೂರು ನಗರದ ಊರ್ವದಲ್ಲಿ ಮಲ್ಟಿಸ್ಪೋರ್ಟ್ಸ್ ಕಾಂಪ್ಲೆಕ್ಸ್ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಊರ್ವದಲ್ಲಿ ಎಷ್ಟು ಎಕರೆ ಭೂಮಿ ಇದೆ; ಯಾರ ಹೆಸರಿನಲ್ಲಿದೆ; ಈ ಬೇಡಿಕೆಗೆ ಇಲಾಖೆಯ ಕ್ರಮಗಳೇನು;

(ಇ) ರಾಜ್ಯದಲ್ಲಿ ೨೦೧೪–೧೫ ಮತ್ತು ೨೦೧೫–೧೬ರಲ್ಲಿ ಕ್ರೀಡಾ ಇಲಾಖೆಯಿಂದ ಯಾವ ಯಾವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ; ಈ ಕಾರ್ಯಕ್ರಮದಲ್ಲಿ ಮಾಡಿದ ಖರ್ಚು ಎಷ್ಟು;

(ಈ) ಕ್ರೀಡಾ ಇಲಾಖೆಯಲ್ಲಿ ಒಟ್ಟು ಎಷ್ಟು ಹುದ್ದೆಗಳಿವೆ; ಖಾಲಿ ಇರುವ ಹುದ್ದೆಗಳೆಷ್ಟು; ಹುದ್ದೆಗಳನ್ನು ಭರ್ತಿ ಮಾಡಲು ಇಲಾಖೆ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಉ) ಮೂಡಬಿದ್ರೆಯಲ್ಲಿ ನಡೆದ ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದ ವಿವಿಧ ಕ್ರೀಡಾ ಚಟುವಟಿಕೆಗಳು ಯಾವುವು; ಮಾಡಿರುವ ಖರ್ಚು ಎಷ್ಟು? (ವಿವರ ನೀಡುವುದು)

## ರಾಜ್ಯದ ಮೀನುಗಾರರಿಗೆ ಇಂಧನಕ್ಕಾಗಿ ನೀಡುವ ಸಹಾಯಧನದ ಬಗ್ಗೆ

**ಶ್ರೀ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೫೬ (೧೩೧೨) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮೀನುಗಾರರಿಗೆ ಇಂಧನಕ್ಕಾಗಿ (ಡೀಸೆಲ್) ನೀಡುವ ಸಹಾಯ ಧನವೆಷ್ಟು; ಕಳೆದ ೨ ವರ್ಷಗಳಲ್ಲಿ ಎಷ್ಟು ಮೀನುಗಾರರಿಗೆ ಈ ಸಹಾಯಧನ ನೀಡಲಾಗಿದೆ;

(ಆ) ರಾಜ್ಯದ ಎಷ್ಟು ಕೆರೆಗಳಲ್ಲಿ ಮೀನು ಸಾಕಾಣಿಕೆಯನ್ನು ಮಾಡಲಾಗುತ್ತಿದೆ; ಇದಕ್ಕೆ ಸರ್ಕಾರ ಯಾವ ರೀತಿ ಪ್ರೋತ್ಸಾಹ ನೀಡುತ್ತಿದೆ;

(ಇ) ಮೀನಿನ ಉತ್ಪನ್ನಗಳ ನಿರ್ಯಾತದಿಂದ ರಾಜ್ಯ ಸರ್ಕಾರಕ್ಕೆ ಬರುತ್ತಿರುವ ಆದಾಯವೆಷ್ಟು; ಕಳೆದ ೨ ವರ್ಷಗಳಲ್ಲಿ ಎಷ್ಟು ಆದಾಯ ಬಂದಿದೆ? (ಜಿಲ್ಲಾವಾರು ವಿವರ ನೀಡುವುದು)

## ಮಂಡ್ಯ ಜಿಲ್ಲೆಯಲ್ಲಿನ ಏತ ನೀರಾವರಿ ಯೋಜನೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೭ (೧೩೬೭) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಸೇರಿರುವ ಕೆರೆಗಳೆಷ್ಟು;

(ಆ) ತಾಲ್ಲೂಕು ವ್ಯಾಪ್ತಿಯಲ್ಲಿ ಕೈಗೊಂಡಿರುವ ಏತ ನೀರಾವರಿ ಯೋಜನೆಗಳೆಷ್ಟು; ಅವು ಯಾವುವು;

(ಇ) ಕಳೆದ ಹಲವಾರು ವರ್ಷಗಳಿಂದ ಸದರಿ ಯೋಜನೆಗಳು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸಣ್ಣ ಕೆರೆಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಪ್ರಸಕ್ತ ವರ್ಷದಲ್ಲಿ ಎಷ್ಟು ಸಣ್ಣ ಕೆರೆಗಳನ್ನು ಅಭಿವೃದ್ಧಿ ಮಾಡಲಾಗುವುದು; ಅವು ಯಾವುವು? (ಕೆರೆಗಳವಾರು ವಿವರ ನೀಡುವುದು)

## ಯುವಜನ ಮತ್ತು ಕ್ರೀಡಾ ಇಲಾಖೆಯ ಕಾರ್ಯಕ್ರಮಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೮ (೧೩೨೫) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಯುವಜನ ಮತ್ತು ಕ್ರೀಡಾ ಇಲಾಖೆಗೆ ಪ್ರಸಕ್ತ ವರ್ಷ ನೀಡಿರುವ ಅನುದಾನ ಎಷ್ಟು;

(ಆ) ಯಾವ ಯಾವ ಕಾರ್ಯಕ್ರಮಗಳಿಗೆ ಈ ಅನುದಾನವನ್ನು ಬಳಸಲಾಗಿದೆ;

(ಇ) ಯುವ ಸಬಲೀಕರಣಕ್ಕಾಗಿ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ; ಆ ಪೈಕಿ ಜಾರಿಗೆ ತರಲಾಗಿರುವ ಯೋಜನೆಗಳಾವುವು; ಸದರಿ ಯೋಜನೆಗಳಿಗೆ ಖರ್ಚು ಮಾಡಲಾಗಿರುವ ಹಣ ಎಷ್ಟು?

## ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಬಗ್ಗೆ

**ಡಾ. ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೯ (೧೨೮೧) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿನ ಅಸಂಘಟಿತ ವಲಯದಲ್ಲಿನ ಕಾರ್ಮಿಕರು ಸಾಮಾಜಿಕ ಭದ್ರತಾ ಸೌಲಭ್ಯಗಳಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಅಸಂಘಟಿತ ವಲಯದ ಕಾರ್ಮಿಕ ಕಲ್ಯಾಣಕ್ಕಾಗಿ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು;

(ಇ) ಅಸಂಘಟಿತ ವಲಯದ ಕಾರ್ಮಿಕರಿಗೆ ಆರೋಗ್ಯ ಮತ್ತು ಶೈಕ್ಷಣಿಕ ಸೌಲಭ್ಯಗಳನ್ನು ಯಾವಾಗ ನೀಡಲಾಗುವುದು;

(ಈ) ಸರ್ಕಾರವು ನಿಗದಿಪಡಿಸಿದ ವಿವಿಧ ಕಾರ್ಮಿಕರ ಕನಿಷ್ಠ ವೇತನವೆಷ್ಟು;

(ಉ) ಕಾರ್ಮಿಕರ ಕನಿಷ್ಠ ವೇತನವನ್ನು ಹೆಚ್ಚಿಸಲಾಗುವುದೇ; ಹಾಗಿದ್ದಲ್ಲಿ, ಯಾವಾಗ?

## ರಾಜ್ಯದಲ್ಲಿ ಹೆಚ್ಚಾಗುತ್ತಿರುವ ಪ್ರಾಣಿಗಳ ದಾಳಿಯ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೬೦ (೧೨೭೨) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಮೂರು ವರ್ಷಗಳಲ್ಲಿ ಪ್ರಾಣಿಗಳ ದಾಳಿಯಿಂದ ರಾಜ್ಯದಲ್ಲಿ ಮೃತಪಟ್ಟವರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿ ಪ್ರಾಣಿಗಳ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಜಿಲ್ಲೆಯಲ್ಲಿ ಹುಲಿ ಹಾವಳಿ ಇರುವ ಸ್ಥಳಗಳಾವುವು; ಹುಲಿ ಹಾವಳಿ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು)

(ಈ) ಕೊಡಗು ಜಿಲ್ಲೆಯಲ್ಲಿ ಹುಲಿದಾಳಿಗೆ ಒಳಗಾದವರ ಕುಟುಂಬಕ್ಕೆ ಯಾವ ರೀತಿಯ ನೆರವನ್ನು ಸರ್ಕಾರ ನೀಡಿದೆ? (ಮಾಹಿತಿ ಒದಗಿಸುವುದು)

## ಕುಂದಾಪುರದ ತಾಲ್ಲೂಕು ಕಛೇರಿಯಲ್ಲಿ ರೈತರು, ಸಾರ್ವಜನಿಕರಿಗಾಗುತ್ತಿರುವ ತೊಂದರೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೬೧ (೧೨೪೮) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕು ಕಛೇರಿಯಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕೆಲಸದ ಅವಧಿಯಲ್ಲಿ ಕಛೇರಿಯಲ್ಲಿರದೆ, ಕೆಲಸದ ಅವಧಿ ಮುಗಿದ ನಂತರ ಕಛೇರಿಗೆ ಬರುವ ಉದ್ದೇಶವೇನು; ತಾಲ್ಲೂಕು ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಸರ್ಕಾರ ನಿಗದಿಪಡಿಸಿದ ಕಛೇರಿ ಹಾಜರಾತಿ ಮತ್ತು ನಿರ್ಗಮಿಸುವ ಅವಧಿ ಯಾವುದು; ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಛೇರಿ ಸಮಯದಲ್ಲಿ ಕಾರ್ಯನಿರ್ವಹಿಸುವಂತೆ ಮಾಡಲು ಇಲಾಖೆ ತೆಗೆದುಕೊಂಡ ಕ್ರಮಗಳೇನು;

(ಆ) ಕುಂದಾಪುರ ತಾಲ್ಲೂಕು ಕಛೇರಿಯಲ್ಲಿ ಕೊಠಡಿಗೆ ಹವಾನಿಯಂತ್ರಿತ ಯಂತ್ರ (Air Condition) ಅಳವಡಿಸಿರುವುದು ಸರ್ಕಾರ ಗಮನಿಸಿದೆಯೇ; ಗಮನಿಸಿದ್ದಲ್ಲಿ, ಹವಾನಿಯಂತ್ರಿತ ಯಂತ್ರ ಅಳವಡಿಸಲು ಸರ್ಕಾರದಿಂದ ಅನುಮತಿ ಪಡೆಯಲಾಗಿದೆಯೇ; ಹಾಗೂ ಸರ್ಕಾರ ಅನುಮತಿ ನೀಡಿದೆಯೇ; (ಸರ್ಕಾರಕ್ಕೆ ಸಲ್ಲಿಸಿರುವ ಬೇಡಿಕೆ ಪತ್ರದ ಪ್ರತಿ ಹಾಗೂ ಸರ್ಕಾರ ನೀಡಿದ ಅನುಮತಿ ಪತ್ರದ ಪ್ರತಿ ಒದಗಿಸುವುದು)

(ಇ) ನೂರಾರು ಬಡ ರೈತರು, ಕೂಲಿ ಕಾರ್ಮಿಕರು ಹಾಗೂ ಜನ ಸಾಮಾನ್ಯರು, ತಾಲ್ಲೂಕು ಕಛೇರಿ ಮುಂಭಾಗ ಪಹಣಿ ಪತ್ರ ಪಡೆಯಲು ನೆಮ್ಮದಿ ಕೇಂದ್ರಕ್ಕೆ ಅರ್ಜಿ ಸಲ್ಲಿಸಲು ಹಾಗೂ ಬೇರೆ ಬೇರೆ ಕಾರ್ಯ ನಿಮಿತ್ತ ಸರತಿ ಸಾಲಿನಲ್ಲಿ ದಿನವಿಡಿ ಉರಿಬಿಸಿಲಿನಲ್ಲಿ ನಿಂತಿರುವಾಗ ಕಂದಾಯ ಇಲಾಖಾಧಿಕಾರಿಗಳು ಹವಾನಿಯಂತ್ರಿತ ಕೊಠಡಿಯಲ್ಲಿ ಕುಳಿತುಕೊಳ್ಳುವುದು ಸರ್ಕಾರದ ಮೇಲೆ ದುಷ್ಪರಿಣಾಮ ಬೀರುವುದಿಲ್ಲವೇ?

## ತರಬೇತಿ ಅಧಿಕಾರಿಗಳಿಗೆ ೩೭೧(J) ಅನ್ವಯ ಪದೋನ್ನತಿ ನೀಡದಿರುವ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೧೬೨ (೧೨೬೦) ಕಾರ್ಮಿಕ ^ತಾಇನಿ^ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರಿ ಐ.ಟಿ.ಐ. ತರಬೇತಿ ಸಂಸ್ಥೆಗಳಲ್ಲಿ ಖಾಲಿ ಇರುವ ಪ್ರಾಚಾರ್ಯರು ದರ್ಜೆ–೨ ಹುದ್ದೆಗಳೆಷ್ಟು; ಕಳೆದ ಎಷ್ಟು ವರ್ಷಗಳಿಂದ ಹುದ್ದೆಗಳು ಖಾಲಿ ಇವೆ; ಖಾಲಿ ಹುದ್ದೆಗಳ ಭರ್ತಿಗೆ ಕೈಗೊಂಡಿರುವ ಕ್ರಮಗಳೇನು;

(ಆ) ಭಾರತೀಯ ಸಂವಿಧಾನ ಅನುಚ್ಛೇದ ೩೭೧ (ಜೆ) ಅನ್ವಯ ಹೈದ್ರಾಬಾದ್–ಕರ್ನಾಟಕ ಪ್ರದೇಶದ ತರಬೇತಿ ಅಧಿಕಾರಿಗಳಿಗೆ ಪ್ರಾಚಾರ್ಯರು ದರ್ಜೆ–೨ ಹುದ್ದೆಗೆ ಪದೋನ್ನತಿ ನೀಡದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಪದೋನ್ನತಿ ನೀಡದೇ ಇರಲು ಕಾರಣವೇನು;

(ಇ) ಪದೋನ್ನತಿ ನೀಡಲು ಕೈಗೊಂಡಿರುವ ಕ್ರಮಗಳೇನು; ಯಾವ ಕಾಲಮಿತಿಯಲ್ಲಿ ಪದೋನ್ನತಿ ನೀಡಲಾಗುವುದು?

## ಆನೆ ನಿರೋಧಕ ಕಂದಕಗಳ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) –**

೧೬೩ (೧೩೪೧) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮನುಷ್ಯರ ವಸತಿಗೆ ಪ್ರವೇಶ ನೀಡದಂತೆ, ಕಾಡಿನಗಡಿಯಲ್ಲಿ ಇಲಾಖಾ ವತಿಯಿಂದ ಆನೆ ನಿರೋಧಕ ಕಂದಕಗಳನ್ನು ಯಾವ ಯಾವ ಜಿಲ್ಲೆಯಲ್ಲಿ ತೆಗೆಯಲಾಗಿದೆ; ಎಷ್ಟು ಕಿ.ಮೀ.ಗಳನ್ನು ತೆಗೆಯಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬಂಡೀಪುರ ಅರಣ್ಯ ಪ್ರದೇಶದಲ್ಲಿ ಆನೆ ನಿರೋಧಕ ಕಂದಕವನ್ನು ಯಾವ ವರ್ಷ ತೆಗೆಯಲಾಗಿದೆ; ಎಷ್ಟು ಕಿ.ಮೀ. ದೂರ ತೆಗೆಯಲಾಗಿದೆ; ಒಟ್ಟು ಮಾಡಿದ ವೆಚ್ಚ ಎಷ್ಟು;

(ಇ) ಇಲಾಖೆ ಪಾರದರ್ಶಕ ನಿಯಮಾನುಸಾರ ಕಂದಕ ನಿರ್ಮಿಸಿದೆಯೇ; ನಿರ್ಮಿಸಿದ್ದಲ್ಲಿ, ಯಾವ ದರದ ಅನುಸಾರ ನಿರ್ಮಿಸಿದೆ? (ಗುತ್ತಿಗೆದಾರರ ವಿವರ ನೀಡುವುದು)

## ಎತ್ತಿನಹೊಳೆ ಯೋಜನೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೬೪ (೧೨೫೮) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಎತ್ತಿನಹೊಳೆ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅದರ ವ್ಯಾಪ್ತಿ, ಅಂದಾಜು ವೆಚ್ಚ ಮತ್ತು ಉಪಯೋಗಗಳೇನು; (ವಿವರವನ್ನು ಒದಗಿಸುವುದು)

(ಆ) ಇದುವರೆಗೆ ಆಗಿರುವ ಪ್ರಯತ್ನಗಳು, ಅಡೆತಡೆಗಳು ಹಾಗೂ ಮುಂದಿನ ಯೋಜನೆ ಮತ್ತು ಗುರಿ ಏನು? (ವಿವರವನ್ನು ಒದಗಿಸುವುದು)

# ಕ್ರೀಡಾ ಇಲಾಖೆಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಹೆಸರಿನಲ್ಲಿ ಖರೀದಿಸಿದ ಕ್ರೀಡಾ ಉಪಕರಣದ ಬಗ್ಗೆ

**ಶ್ರೀ ಅಶ್ವಥ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೬೫ (೧೨೯೧) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕ್ರೀಡಾ ಇಲಾಖೆಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಮಕ್ಕಳ ಹೆಸರಿನಲ್ಲಿ ಖರೀದಿಸಿದ ಕ್ರೀಡಾ ಪರಿಕರಗಳನ್ನು ಹಂಚದೆ, ದೂಳು ತುಂಬಿದ್ದು ಮತ್ತು ಖರೀದಿಸಿದ ಕ್ರೀಡಾ ಪರಿಕರಗಳು ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಟೆಂಡರ್ ಮುಖೇನ ಖರೀದಿಸುವಾಗ ಅಕ್ರಮ ನಡೆದಿರುವುದು ನಿಜವೇ;

(ಆ) ೨೦೧೪–೧೫ರಲ್ಲಿ ಕ್ರೀಡಾ ಉಪಕರಣಗಳಿಗಾಗಿ ಯಾವಾಗ ಟೆಂಡರ್ ಕರೆಯಲಾಗಿತ್ತು; ಎಷ್ಟು ಹಣವನ್ನು ಕ್ರೀಡಾ ಉಪಕರಣಗಳಿಗಾಗಿ ವ್ಯಯ ಮಾಡಲಾಗಿದೆ; ಮತ್ತು ಯಾವ ಯಾವ ಜಿಲ್ಲೆಗಳಿಗೆ ಯಾವ ಆಧಾರದ ಮೇಲೆ ವಿತರಿಸಲಾಗಿದೆ;

(ಇ) ರಾಜ್ಯದಲ್ಲಿ ೨೦೧೪–೧೫ ಹಾಗೂ ೨೦೧೫–೧೬ರಲ್ಲಿ ಯುವಜನ ಮತ್ತು ಕ್ರೀಡಾ ಇಲಾಖೆಗೆ ಬಿಡುಗಡೆ ಮಾಡಿದ ಹಣವೆಷ್ಟು; ಬಿಡುಗಡೆ ಮಾಡಿದ ಅನುದಾನದಲ್ಲಿ ಕ್ರೀಡಾ ಚಟುವಟಿಕೆ, ಮೈದಾನ ಇವುಗಳಿಗೆ ಖರ್ಚು ಮಾಡಿದ ಹಣವೆಷ್ಟು;

(ಈ) ೨೦೧೪–೧೫ ಮತ್ತು ೨೦೧೫–೧೬ರಲ್ಲಿ ಯುವ ಕ್ರೀಡಾ ಇಲಾಖೆಗೆ ಕೇಂದ್ರದಿಂದ ಬಿಡುಗಡೆಯಾದ ಹಣವೆಷ್ಟು; ಅದನ್ನು ಯಾವ ಯಾವ ಯೋಜನೆಗಳಿಗೆ ಉಪಯೋಗಿಸಲಾಗಿದೆ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು, ಕಾಸೂ–1125–1500 ಪ್ರತಿಗಳು (ಪಿ1)